All India Radio: Bangalore
Regional Bulletin In Kannada
16.02.2026 / 6.40 p.m.
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ರಕ್ಷಣಾ ಕ್ಷೇತ್ರದಲ್ಲಿನ ತಾಂತ್ರಿಕ ಪ್ರಗತಿಗಳು ದೇಶದ ಆರ್ಥಿಕ ಬೆಳವಣಿಗೆಗೆ ಬುನಾದಿ - ರಕ್ಷಣಾ ಸಚಿವ ರಾಜನಾಥ್ ಸಿಂಗ್
- ವೇಮಗಲ್‌ನ ಏರ್‌ಬಸ್ ಎಚ್-೧೨೫ ಹೆಲಿಕಾಪ್ಟರ್ ಘಟಕಕ್ಕೆ ನಾಳೆ ಪ್ರಧಾನಿ ಹಾಗೂ ಫ್ರಾನ್ಸ್ ಅಧ್ಯಕ್ಷರಿಂದ ವರ್ಚುವಲ್ ಮೂಲಕ ಚಾಲನೆ
- ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಗಳೊಂದಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಬಜೆಟ್ ಪೂರ್ವ ಸಭೆ
- ಬಾಗೇಪಲ್ಲಿ ಕಾಂಗ್ರೆಸ್ ಶಾಸಕ ಸುಬ್ಬಾರೆಡ್ಡಿ ಆಯ್ಕೆ ಅಸಿಂಧು ; ಹೈಕೋರ್ಟ್ ಆದೇಶ
- ರಣಜಿ ಟ್ರೋಫಿ ಸೆಮಿಫೈನಲ್ ಹಣಾಹಣಿ ; ಉತ್ತರಾಖಂಡ್ ವಿರುದ್ಧ ದಿನದಾಟದ ಅಂತ್ಯಕ್ಕೆ ೬೮೯ ರನ್ ಗಳಿಸಿದ ಕರ್ನಾಟಕ

****************

ಕೋಲಾರ ತಾಲೂಕಿನ ವೇಮಗಲ್ ಕೈಗಾರಿಕಾ ಪ್ರದೇಶದಲ್ಲಿ ಟಾಟಾ ಅಡ್ವಾನ್ಸಡ್ ಸಿಸ್ಟಮ್ಸ್ ಲಿಮಿಟೆಡ್‌ನ ಏರ್‌ಬಸ್ ಎಚ್-೧೨೫ ಹೆಲಿಕಾಪ್ಟರ್‌ನ ಅಂತಿಮ ಜೋಡಣಾ ಘಟಕವನ್ನು ನಾಳೆ ಪ್ರಧಾನಿ ನರೇಂದ್ರ ಮೋದಿ ಮತ್ತು ಫ್ರಾನ್ಸ್ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರನ್ ವರ್ಚುವಲ್ ಮೂಲಕ ಉದ್ಘಾಟಿಸಲಿದ್ದಾರೆ. ಈ ವೇಳೆ ಕೇಂದ್ರ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಉಪಸ್ಥಿತರಿರಲಿದ್ದಾರೆ.

ಏರೋಸ್ಪೇಸ್ ಹಾಗೂ ರಕ್ಷಣಾ ಕ್ಷೇತ್ರದಲ್ಲಿ ಕರ್ನಾಟಕ ಶೇಕಡ ೬೫ರಷ್ಟು ಕೊಡುಗೆಯೊಂದಿಗೆ ದೇಶದಲ್ಲಿ ಮೊದಲ ಸ್ಥಾನದಲ್ಲಿದೆ.

ಈ ಘಟಕದಲ್ಲಿ  ವಾರ್ಷಿಕವಾಗಿ ೧೦ ಹೆಲಿಕಾಪ್ಟರ್ ಉತ್ಪಾದಿಸುವ ಗುರಿ ಹೊಂದಲಾಗಿದೆ. ಮುಂದಿನ ವರ್ಷಗಳಲ್ಲಿ ೫೦೦ ಲಘು ಹೆಲಿಕಾಪ್ಟರ್ ತಯಾರಿಕೆಗೆ ಬೇಡಿಕೆ ಬರಬಹುದು ಎಂದು ಏರ್‌ಬಸ್ ಅಂದಾಜಿಸಿದೆ. ಇದೇ ಮೊದಲ ಬಾರಿಗೆ ಕೋಲಾರದಲ್ಲಿ ಖಾಸಗಿ ಹೆಲಿಕಾಪ್ಟರ್ ಅಸೆಂಬ್ಲಿ ಘಟಕ ಆರಂಭವಾಗಿರುವುದು ಆತ್ಮ ನಿರ್ಭರ ಭಾರತಕ್ಕೆ ಮತ್ತಷ್ಟು ಶಕ್ತಿ ತುಂಬಲಿದೆ.

****************

ಬೆಂಗಳೂರಿನಲ್ಲಿರುವ ಡಿಆರ್‌ಡಿಒ ನ ಗ್ಯಾಸ್ ಟರ್ಬೈನ್ ಸಂಶೋಧನಾ ಸಂಸ್ಥೆಯ ಕೇಂದ್ರಕ್ಕೆ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಇಂದು ಭೇಟಿ ನೀಡಿ, ಸ್ವದೇಶಿ ಮಿಲಿಟರಿ ಗ್ಯಾಸ್ ಟರ್ಬೈನ್ ಎಂಜಿನ್ ಅಭಿವೃದ್ಧಿಗೆ ಸಂಬಂಧಿಸಿದಂತೆ ನಡೆಯುತ್ತಿರುವ ಯೋಜನೆಗಳ ಪ್ರಗತಿಯನ್ನು ಪರಿಶೀಲಿಸಿದರು. ರಾಷ್ಟ್ರವ್ಯಾಪಿ ಬಲಿಷ್ಠ ಪರಿಸರ ವ್ಯವಸ್ಥೆ ನಿರ್ಮಿಸುವ ಮೂಲಕ ಮುಂದಿನ ಪೀಳಿಗೆಯ ಎಂಜಿನ್‌ಗಳ ಮೇಲೆ ಗಮನ ಕೇಂದ್ರೀಕರಿಸಲು ಮತ್ತು ಏರೋ ಎಂಜಿನ್‌ಗಳಲ್ಲಿ ಸ್ವಾವಲಂಬನೆ ಸಾಧಿಸಲು ವಿಜ್ಞಾನಿಗಳ ತಂಡಕ್ಕೆ ಪ್ರೋತ್ಸಾಹಿಸಿದರು.

ಈ ವೇಳೆ ಮಾತನಾಡಿದ ಅವರು, ನಿರ್ಣಾಯಕ ತಂತ್ರಜ್ಞಾನ ಕ್ಷೇತ್ರದಲ್ಲಿ ಜಿಟಿಆರ್‌ಇನ ಪ್ರಯತ್ನಗಳು ಶ್ಲಾಘನೀಯವಾಗಿವೆ ಎಂದು ತಿಳಿಸಿದರು.

ಏರೋ ಇಂಜಿನ್‌ಗಳಲ್ಲಿ ಸ್ವಾವಲಂಬನೆ ಸಾಧಿಸಲು ದೃಢವಾದ ರಾಷ್ಟ್ರೀಯ ಪರಿಸರ ವ್ಯವಸ್ಥೆಯನ್ನು ನಿರ್ಮಿಸಲು ಕರೆ ನೀಡಿದ್ದಾರೆ. ಬ್ರಿಟನ್‌ನೊಂದಿಗೆ ಏರೋ ಇಂಜಿನ್ ಕುರಿತು ಜಂಟಿ ಸಂಶೋಧನೆ ನಡೆಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

ರಕ್ಷಣಾ ಕ್ಷೇತ್ರದಲ್ಲಿನ ತಾಂತ್ರಿಕ ಪ್ರಗತಿಗಳು ವಿಶಾಲ ಆರ್ಥಿಕ ಬೆಳವಣಿಗೆಗೆ ಕೊಡುಗೆ ನೀಡಬಹುದು ಎಂದು

****************

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿಂದು ವಾಣಿಜ್ಯ ಸಂಘ ಸಂಸ್ಥೆಗಳ ಪ್ರತಿನಿಧಿಗಳ ಜೊತೆ ೨೦೨೬-೨೭ನೇ ಸಾಲಿನ ಆಯವ್ಯಯ ಪೂರ್ವ ಸಭೆ ನಡೆಸಿದರು.

ಸಭೆಯ ಬಳಿಕ ಮಾತನಾಡಿದ ಕರ್ನಾಟಕ ವಾಣಿಜ್ಯ ಮತ್ತು ಕೈಗಾರಿಕ ಮಹಾ ಸಂಸ್ಥೆ ಅಧ್ಯಕ್ಷೆ ಉಮಾರೆಡ್ಡಿ ಮಾತನಾಡಿ, ಈ ಬಾರಿಯ ಬಜೆಟ್‌ನಲ್ಲಿ ಆರ್ಥಿಕ ಚೇತರಿಕೆ, ಹೂಡಿಕೆ ಪುನಶ್ಚೇತನ ಕೈಗಾರಿಕಾ ಬೆಳವಣಿಗೆ ಮತ್ತು ಬೆಂಗಳೂರಿನ ಆಚೆಗೂ ಅಭಿವೃದ್ಧಿಗೆ ಆದ್ಯತೆ ನೀಡಬೇಕು ಎಂದು ತಿಳಿಸಿದ್ದಾರೆ.

ಬಳಿಕ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಾರಿಗೆ ಸಂಸ್ಥೆಗಳ ಪ್ರತಿನಿಧಿಗಳ ಜೊತೆಗೆ ಆಯ-ವ್ಯಯ ಪೂರ್ವ ಸಮಾಲೋಚನೆ ನಡೆಸಿದರು.

****************

ಬಾಗೇಪಲ್ಲಿ ವಿಧಾನಸಭಾಕ್ಷೇತ್ರದ ಕಾಂಗ್ರೆಸ್ ಶಾಸಕ ಎಸ್.ಎನ್.ಸುಬ್ಬಾರೆಡ್ಡಿ ಅವರು, ಸಲ್ಲಿಸಿದ್ದ ಚುನಾವಣೆಯ ಅಫಿಡವಿಟ್‌ನಲ್ಲಿ ಅಕ್ರಮಗಳು ನಡೆದಿವೆ ಎಂದು ಅವರ ಸದಸ್ಯತ್ವವನ್ನು ಕರ್ನಾಟಕ ಹೈಕೋರ್ಟ್ ಅಸಿಂಧುಗೊಳಿಸಿದೆ. ನ್ಯಾಯಮೂರ್ತಿ ಎಂ.ಜಿ.ಎಸ್.ಕಮಲ್ ನೇತೃತ್ವದ ಪೀಠವು ವಾದ-ಪ್ರತಿವಾದ ಆಲಿಸಿ ಸುಬ್ಬಾರೆಡ್ಡಿ ಆಯ್ಕೆ ಅಸಿಂಧು ಎಂದು ಆದೇಶ ನೀಡಿದೆ.

ಅಧಿಕಾರಿಗಳು ಸಲ್ಲಿಸಿದ ವರದಿಗಳನ್ನು ಪರಿಶೀಲಿಸಿದ ನ್ಯಾಯಾಲಯ ಆದೇಶದ ಪ್ರತಿಯನ್ನು ಚುನಾವಣಾ ಆಯೋಗ ಮತ್ತು ಕರ್ನಾಟಕ ವಿಧಾನಸಭೆ ಕಾರ್ಯದರ್ಶಿಗೆ ಕಳುಹಿಸುವಂತೆ ಸೂಚಿಸಿದೆ. ಸುಬ್ಬಾರೆಡ್ಡಿ ಚುನಾವಣೆಯನ್ನು ಅಕ್ರಮಗಳ ಮೂಲಕ ಗೆದ್ದಿದ್ದಾರೆ ಎಂದು ಆರೋಪಿಸಿ ಪರಾಜಿತ ಅಭ್ಯರ್ಥಿ ಸಿ.ಮುನಿರಾಜು ಹೈಕೋರ್ಟ್‌ನಲ್ಲಿ ಅರ್ಜಿ ಸಲ್ಲಿಸಿದ್ದರು.

****************

ಹಂಪಿಯಲ್ಲಿ ನಡೆದ ಇಸ್ರೇಲ್ ಪ್ರವಾಸಿ ಮಹಿಳೆ ಮತ್ತು ರಾಜ್ಯದ ಮಹಿಳೆಯ ಮೇಲೆ ನಡೆದ ಸಾಮೂಹಿಕ ಅತ್ಯಾಚಾರ ಮತ್ತು ಹಂಪಿಯ ಸಣಾಪುರ ಸರೋವರದ ಬಳಿ ನಡೆದ ಪ್ರವಾಸಿಗನ ಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಮೂವರಿಗೆ ಮರಣ ದಂಡನೆ ಶಿಕ್ಷೆ ವಿಧಿಸಲಾಗಿದೆ.

ಕೊಪ್ಪಳ ಜಿಲ್ಲೆಯ ಗಂಗಾವತಿಯ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯದ ನ್ಯಾಯಾಧೀಶರಾದ ಸದನಂದ ನಾಗಪ್ಪ ನಾಯಕ ಅವರು, ಶಿಕ್ಷೆಯ ಪ್ರಮಾಣವನ್ನು ಇಂದು ಪ್ರಕಟಿಸಿದ್ದಾರೆ.

ಘಟನೆ ನಡೆದ ೧೧ ತಿಂಗಳೊಳಗೆ ಈ ತೀರ್ಪು ಹೊರ ಬಿದ್ದಿದೆ. ಈ ಘಟನೆ ಬಳಿಕ ಹಂಪಿ ಹಾಗೂ ಅಂಜನಾದ್ರಿ ಬೆಟ್ಟದ ಪ್ರವಾಸಿ ತಾಣಗಳಿಗೆ ವಿದೇಶಿ ಪ್ರವಾಸಿಗರ ಭೇಟಿಯಲ್ಲಿ ಗಮನಾರ್ಹ ಇಳಿಕೆಯಾಗಿತ್ತು.

***************

ಬೆಳಗಾವಿ ಜಿಲ್ಲೆಯ ಬೈಲಹೊಂಗಲದ ಸಾರ್ವಜನಿಕ ಆಸ್ಪತ್ರೆಯ ಆವರಣದಲ್ಲಿಂದು ೫೦ ಹಾಸಿಗೆಯುಳ್ಳ ತೀವ್ರ ನಿಗಾ ಘಟಕ ಕ್ರಿಟಿಕಲ್ ಕೇರ್ ಯೂನಿಟ್ ನಿರ್ಮಾಣ ಕಾಮಗಾರಿಯ ಶಂಕುಸ್ಥಾಪನೆಯನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಚಿವ ದಿನೇಶ್ ಗುಂಡೂರಾವ್ ನೆರವೇರಿಸಿದರು.

ಬಳಿಕ ಮಾತಾಡಿದ ಅವರು, ರಾಜ್ಯದಲ್ಲಿ ಅತ್ಯುತ್ತಮವಾಗಿ ಸೇವೆ ಸಲ್ಲಿಸುತ್ತಿರುವ ತಾಲೂಕಾ ಆಸ್ಪತ್ರೆಗಳಲ್ಲಿ ಬೈಲಹೊಂಗಲ ಆಸ್ಪತ್ರೆ ಮುಂಚೂಣಿಯಲ್ಲಿದೆ.  ಇದೇ ಮಾದರಿಯಲ್ಲಿ ಸೇವೆ ಸಲ್ಲಿಸಿದರೆ ರೋಗಿಗಳ ಬಹುತೇಕ ಸಮಸ್ಯೆಗಳು ಪರಿಹಾರವಾಗಲಿದೆ. ಬೈಲಹೊಂಗಲ ಆಸ್ಪತ್ರೆಗೆ ರೋಗಿಗಳ ಸಂಖ್ಯೆ ಹೆಚ್ಚಾಗುತ್ತಿರುವುದರಿಂದ ಮುಂದೆ ೫೦ ರಿಂದ ನೂರು ಹಾಸಿಗೆ ಸೌಲಭ್ಯ ಒದಗಿಸಿ ಮೇಲ್ದರ್ಜೆಗೆ ಏರಿಸಲಾಗುವುದು ಎಂದು ಭರವಸೆ ನೀಡಿದ್ದಾರೆ.

ಧ್ವನಿ : ದಿನೇಶ್ ಗುಂಡೂರಾವ್

***************

ಮಕ್ಕಳ ಭವಿಷ್ಯ ರೂಪಿಸುವ ನಿಟ್ಟಿನಲ್ಲಿ  ಗುಣಮಟ್ಟದ ಶಿಕ್ಷಣ ದೊರಕಿಸಲು ಶಿಕ್ಷಕರು ಯೋಜನಾ ಬದ್ಧವಾಗಿ ಬೋಧನೆಗೆ ಆದ್ಯತೆ ನೀಡುವಂತೆ ವಿಜಯಪುರ ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲ್ ಕರೆ ನೀಡಿದ್ದಾರೆ.

ವಿಜಯಪುರದಲ್ಲಿ ಜರುಗಿದ ಗ್ರಾಮೀಣ ವಲಯದ ಎಸ್‌ಎಸ್‌ಎಲ್‌ಸಿ ೨೦೨೪ ಪರೀಕ್ಷೆ ಫಲಿತಾಂಶ ಸುಧಾರಣೆಗಾಗಿ ಪುನಶ್ಚೇತನ ಕಾರ್ಯಾಗಾರ ಹಾಗೂ ತಾಲೂಕು ಮಟ್ಟದಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಉತ್ತಮ ಸಾಧನೆ ಮಾಡಿದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಅವರು ಮಾತನಾಡಿದರು.

ಪಾಲಕರು ಕಡ್ಡಾಯವಾಗಿ ಮಕ್ಕಳನ್ನು ಶಾಲೆಗೆ ಕಳುಹಿಸಬೇಕು. ಗುಣಮಟ್ಟದ ಶಿಕ್ಷಣ ಒದಗಿಸುವ ಮೂಲಕ ಮಕ್ಕಳ ಶೈಕ್ಷಣಿಕ ಮಟ್ಟದ ಬೆಳವಣಿಗೆಗಾಗಿ ಪಾಲಕರು, ಶಿಕ್ಷಕರು ವಿಶೇಷ ಗಮನ ಹರಿಸಬೇಕು ಎಂದು ತಿಳಿಸಿದ್ದಾರೆ.

***************

ಭಾರತದ ಪ್ರದರ್ಶನ ಕಲೆಗಳ ವೈವಿಧ್ಯತೆಯನ್ನು ತೆರೆದಿಡುವುದು ಅಖಿಲ ಭಾರತೀಯ ಅಂಚೆ ಸಾಂಸ್ಕೃತಿಕ ಸಮ್ಮೇಳನದ ಉದ್ದೇಶವಾಗಿದೆ ಎಂದು ಅಂಚೆ ಸೇವೆಗಳ ಮಹಾನಿರ್ದೇಶಕ ಜಿತೇಂದ್ರ ಗುಪ್ತಾ ತಿಳಿಸಿದ್ದಾರೆ.

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಕಾವೇರಿ ಸಭಾಂಗಣದಲ್ಲಿಂದು ೩ಲನೇ ಅಖಿಲ ಭಾರತೀಯ ಅಂಚೆ ಸಮ್ಮೇಳನ ಉದ್ಘಾಟಿಸಿ ಮಾತನಾಡಿದ ಅವರು, ಉತ್ತಮ ಸೇವೆಗೆ ಮತ್ತೊಂದು ಹೆಸರಾಗಿರುವ ಅಂಚೆ ಇಲಾಖೆ ಕೇವಲ ಪತ್ರಗಳನ್ನು ಒಂದೆಡೆಯಿಂದ ಮತ್ತೊಂದೆಡೆಗೆ ರವಾನಿಸುವುದಿಲ್ಲ ಬದಲಾಗಿ ಭಾವನೆಗಳನ್ನು ಹೊತ್ತು ತರುತ್ತದೆ ಎಂದು ಹೇಳಿದ್ದಾರೆ.

ಸಾಮಾಜಿಕ ಮಾಧ್ಯಮಗಳ ನಡುವೆಯೂ ಅಂಚೆ ಇಲಾಖೆಯು ತನ್ನ ಮಹತ್ವವನ್ನು ಉಳಿಸಿಕೊಂಡು ಬಂದಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

***************

ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ರಾಜ್ಯದ ಗುತ್ತಿಗೆದಾರರನ್ನು ಸಂಕಷ್ಟಕ್ಕೆ ದೂಡಿದೆ ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ ಆರೋಪಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸರ್ಕಾರ ಗುತ್ತಿಗೆದಾರರಿಗೆ ೩೭ ಸಾವಿರ ಕೋಟಿ ರೂಪಾಯಿ ಬಾಕಿ ಉಳಿಸಿಕೊಂಡಿದೆ ಎಂದು ದೂರಿದ್ದಾರೆ. ಇದು ರಾಜ್ಯದ ಆರ್ಥಿಕ ಕುಸಿತ ಎಂದು ಹೇಳಿದ್ದಾರೆ.

***************

ಲಖನೌದ ಏಕನಾ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ೨೦೨೪-೨೫ರ ರಣಜಿ ಟ್ರೋಫಿಯ ಸೆಮಿಫೈನಲ್ ಪಂದ್ಯದಲ್ಲಿ ಉತ್ತರಾಖಂಡ್ ವಿರುದ್ಧ ಕರ್ನಾಟಕ ಬೃಹತ್ ಮೊತ್ತಗಳ ರನ್ ಪೇರಿಸಿದೆ.

ದಿನದಾಟದ ಅಂತ್ಯಕ್ಕೆ ಕರ್ನಾಟಕ ೬ ವಿಕೆಟ್ ನಷ್ಟಕ್ಕೆ ೬೮೯ ರನ್ ಗಳಿಸಿದೆ. ಮೊದಲ ದಿನ ಕೆ.ಎಲ್.ರಾಹುಲ್ ೧೪೧ ರನ್ ಗಳಿಸಿದರೆ, ನಾಯಕ ದೇವದತ್ ಪಡಿಕ್ಕಲ್ ಶತಕ ಬಾರಿಸಿ ಅಜೇಯರಾಗಿ ಉಳಿದಿದ್ದರು.

೨ನೇ ದಿನ ಬ್ಯಾಟಿಂಗ್ ಮುಂದುವರಿಸಿದ ಪಡಿಕ್ಕಲ್ ದಾಖಲೆಯ ದ್ವಿಶತಕ ಬಾರಿಸಿದ್ದಾರೆ. ಸ್ಮರಣ್ ರವಿಚಂದ್ರನ್ ಕೂಡ ಶತಕ ಬಾರಿಸಿದ್ದು, ಕರ್ನಾಟಕ ತಂಡ ಮೊದಲ ಇನ್ನಿಂಗ್ಸ್‌ನಲ್ಲಿ ಪಂದ್ಯದ ಮೇಲೆ ಹಿಡಿತ ಸಾಧಿಸಿದೆ.

***************

ಅರುಣಾಚಲ ಪ್ರದೇಶದ ರೋಯಿಂಗ್‌ನಲ್ಲಿ ನಡೆಯುತ್ತಿರುವ ೨೨ನೇ ರಾಷ್ಟ್ರೀಯ ಮೌಂಟೆನ್ ಬೈಕ್ ಸೈಕ್ಲಿಂಗ್ ಚಾಂಪಿಯನ್‌ಶಿಪ್‌ನ ಎರಡನೇ ದಿನವಾದ ಇಂದು ಮಹಿಳಾ ಎಲೈಟ್ ಕ್ರಾಸ್ ಕಂಟ್ರಿ ಟೈಂ ಟ್ರಯಲ್ ಸ್ಪರ್ಧೆಯಲ್ಲಿ ಕರ್ನಾಟಕದ ಸ್ವಾರ್ ನರ್ಝುರಿ ಚಿನ್ನದ ಪದಕ ಗೆದ್ದಿದ್ದಾರೆ.

ಪುರುಷರ ಜೂನಿಯರ್ ವಿಭಾಗದಲ್ಲಿ ಮಹಾರಾಷ್ಟ್ರದ ಸೋನಾವಾನೇ ಯೋಗೇಶ್ ಸ್ವರ್ಣ ಪದಕ ತಮ್ಮದಾಗಿಸಿಕೊಂಡಿದ್ದಾರೆ.

***************

ಮಂಡ್ಯ ಜಿಲ್ಲೆಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ದೌರ್ಜನ್ಯ ಪ್ರಕರಣಗಳ ಸಮಸ್ಯೆಗಳನ್ನು ಶೀಘ್ರದಲ್ಲೇ ಪರಿಹರಿಸಬೇಕು ಎಂದು ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗ ಅಧ್ಯಕ್ಷ ಡಾ. ಮೂರ್ತಿ  ತಿಳಿಸಿದ್ದಾರೆ.

ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ಪೊಲೀಸ್ ಅಧೀಕ್ಷಕರೊಂದಿಗೆ ನಡೆದ ಸಭೆಯಲ್ಲಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ೪೬ ರಿಂದ ೪೭ ದೌರ್ಜನ್ಯ ಪ್ರಕರಣಗಳು ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗದಲ್ಲಿ ದಾಖಲಾಗಿವೆ ಎಂದು ಹೇಳಿದ್ದಾರೆ.

***************

ಬೇಸಿಗೆ ಕಾಲ ಗಮನದಲ್ಲಿಟ್ಟುಕೊಂಡು ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ತಲೆದೋರದಂತೆ ಮುಂಚಿತವಾಗಿ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ ಎಂದು ಧಾರವಾಡ ಜಿಲ್ಲಾಧಿಕಾರಿ ಸ್ನೇಹಲ್.ಆರ್ ತಿಳಿಸಿದ್ದಾರೆ.

********ಮುಕ್ತಾಯ********